...gic thinker, and passionate about career development,

ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ಸಂಖ್ಯೆ:ಜಿಎಲ್13/110/2022-23

ದಿನಾಂಕ: 22-11-2024

## ಸುತ್ತೋಲೆ

ವಿಷಯ: ದಿನಾಂಕ:26.11.2024ರಂದು "ಸಂವಿಧಾನ ದಿನ"ವನ್ನು ಆಚರಿಸುವ ಬಗ್ಗೆ.

ಉಲ್ಲೇಖ:1) ಸರ್ಕಾರದ ಉಪ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ(ಕಾರ್ಯಕಾರಿ), ಬೆಂಗಳೂರು, ಇವರ ಪತ್ರದ ಸಂಖ್ಯೆ:DPAR/08/PHL/2024, ದಿನಾಂಕ:20.11.2024.
2) ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:25.11.2024.

****

ಮೈಸೂರು ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗದ ಅಧ್ಯಕ್ಷರು, ನಿರ್ದೇಶಕರು, ಪ್ರಾಂಶುಪಾಲರು, ಬಟವಾಡೆ ಅಧಿಕಾರಿಗಳು, ಅಧ್ಯಾಪಕರು, ಅಧ್ಯಾಪಕೇತರರು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿಗಳಿಗೆ ತಿಳಿಸುವುದೇನೆಂದರೆ, ಮೇಲಿನ ಉಲ್ಲೇಖ 01 ಸರ್ಕಾರದ ಪತ್ರದಲ್ಲಿ ದಿನಾಂಕ:26.11.2024ರಂದು "ಸಂವಿಧಾನ ದಿನ"ವನ್ನು ಆಚರಿಸಲು ಸೂಚಿಸಿರುತ್ತಾರೆ.

ಆದುದರಿಂದ, ದಿನಾಂಕ:26.11.2024ರಂದು ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಒಳಪಡುವ ಎಲ್ಲಾ ವಿಭಾಗ/ಕಛೇರಿಗಳಲ್ಲಿ ಸಂವಿಧಾನದ ಮೌಲ್ಯಗಳ/ಮೂಲ ಆಶಯಗಳ ಬಗ್ಗೆ ಚರ್ಚೆ/ರಸಪ್ರಶ್ನೆ ಕಾರ್ಯಕ್ರಮಗಳನ್ನು ಮತ್ತು ವೆಬಿನಾರ್‌ಗಳನ್ನು ಆಚರಿಸುವಂತೆ ಹಾಗೂ ಹಿಂಪುಟದಲ್ಲಿರುವ "ಭಾರತದ ಸಂವಿಧಾನ ಪೀಠಿಕೆ"ಯನ್ನು ಸಾಮೂಹಿಕವಾಗಿ ಓದುವ ಮೂಲಕ "ಸಂವಿಧಾನ ದಿನ"ವನ್ನು ಆಚರಿಸುವಂತೆ ತಿಳಿಸಲು ನಿರ್ದೇಶಿತಳಾಗಿದ್ದೇನೆ.

ಕುಲಸಚಿವ
22/11/2024

ಗೆ,

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು ಮತ್ತು ಪ್ರಾಧ್ಯಾಪಕರು.
2. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
7. ಸಂಯೋಜಕರು, ಐ.ಡಿ.ಸಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಇವರಿಗೆ ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.
8. ಎಲ್ಲಾ ಉಪ ಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಮಾನ್ಯ ಕುಲಪತಿಯವರ/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈ.ವಿ.ವಿ., ಮೈಸೂರು.
10. ಕಛೇರಿ ಪ್ರತಿ.

Scanned with OKEN Scanner

सत्यमेव जयते

# ಭಾರತದ ಸಂವಿಧಾನ

## ಪ್ರಸ್ತಾವನೆ

ಭಾರತದ ಜನಗಳಾದ ನಾವು ಭಾರತವನ್ನು ಒಂದು
**ಸಾರ್ವಭೌಮ ಸಮಾಜವಾದೀ ಸರ್ವಧರ್ಮ ಸಮಭಾವದ**
**ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ** ರಚಿಸಲು ಮತ್ತು ಅದರ
ಸಮಸ್ತ ನಾಗರಿಕರಿಗೆ:

ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ **ನ್ಯಾಯ**;
ವಿಚಾರ, ಅಭಿವ್ಯಕ್ತಿ, ವಿಶ್ವಾಸ, ಧರ್ಮಶ್ರದ್ಧೆ ಮತ್ತು ಉಪಾಸನಾ
**ಸ್ವಾತಂತ್ರ್ಯ**; ಸ್ಥಾನಮಾನ ಹಾಗೂ ಅವಕಾಶ **ಸಮಾನತೆ**

ದೊರೆಯುವಂತೆ ಮಾಡಲು ಮತ್ತು ವ್ಯಕ್ತಿ ಗೌರವವನ್ನು,
ರಾಷ್ಟ್ರದ ಏಕತೆಯನ್ನು ಹಾಗೂ ಅಖಂಡತೆಯನ್ನು
ಸುನಿಶ್ಚಿತಗೊಳಿಸಿ ಅವರಲ್ಲಿ ಭ್ರಾತೃಭಾವನೆಯನ್ನು
ವೃದ್ಧಿಗೊಳಿಸಲು ಶ್ರದ್ಧಾಪೂರ್ವಕ ಸಂಕಲ್ಪ ಮಾಡಿದವರಾಗಿ;

ನಮ್ಮ ಸಂವಿಧಾನ ಸಭೆಯಲ್ಲಿ 1949 ನೇ ಇಸವಿ ನವೆಂಬರ್
ತಿಂಗಳ ಇಪ್ಪತ್ತಾರನೆಯ ತಾರೀಖಾದ ಈ ದಿವಸ ಈ ಮೂಲಕ
ಈ ಸಂವಿಧಾನವನ್ನು ಅಂಗೀಕರಿಸಿ, ಅಧಿನಿಯಮಿಸಿ
ಅರ್ಪಿಸಿಕೊಂಡಿದ್ದೇವೆ.



Scanned with OKEN Scanner